ಕರ್ನಾಟಕ ಸರ್ಕಾರ
ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ
ನೃಪತುಂಗ ರಸ್ತೆ, ಬೆಂಗಳೂರು–560001

ಸಂಖ್ಯೆ: ಎಡಿಎಂ2(4)/ ರಾಜ್ಯ ನೆರೆ/42/2019–20 ದಿನಾಂಕ: 13–08–2019

## ಜ್ಞಾಪನ

ವಿಷಯ:– ರಾಜ್ಯದ ನೆರೆ ಸಂತ್ರಸ್ತ ಪ್ರದೇಶಗಳ ಶಾಲಾ ವಿದ್ಯಾರ್ಥಿಗಳನ್ನು ಶಾಲೆಗೆ ದಾಖಲಾತಿ ಮಾಡಿಕೊಳ್ಳುವ ಬಗ್ಗೆ ಹಾಗೂ ಮಕ್ಕಳ ಹಿತ ಕಾಪಾಡುವ ಕುರಿತು.

*****

ರಾಜ್ಯದ ಕೊಡಗು, ದಕ್ಷಿಣ ಕನ್ನಡ, ಉಡುಪಿ, ಗದಗ, ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ,ರಾಯಚೂರು, ಇತ್ಯಾದಿ ಹದಿನೇಳು ಜಿಲ್ಲೆಗಳಲ್ಲಿ ಇತ್ತೀಚಿನ ಭಾರಿ ಮಳೆಯಿಂದ ಉಂಟಾಗಿರುವ ಪ್ರವಾಹ ಪರಿಸ್ಥಿತಿಯಿಂದಾಗಿ ಅನೇಕ ಶಾಲೆಗಳು ಮುಳುಗಡೆ/ಹಾನಿಯಾಗಿದ್ದು ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ವ್ಯಾಸಂಗವನ್ನು ಮುಂದುವರೆಸಲು ಅನುಕೂಲವಾಗುವಂತೆ ಅತೀ ತುರ್ತಾಗಿ ಈ ಕೆಳಕಂಡ ಕ್ರಮಗಳನ್ನು ತೆಗೆದುಕೊಳ್ಳಲು ಸೂಚಿಸಿದೆ.

**ವಿದ್ಯಾರ್ಥಿಗಳ ದಾಖಲಾತಿ :**

1. ನೆರೆಯಿಂದ ಹಾನಿಗೊಳಗಾಗಿರುವ ಶಾಲೆಗಳು ಹಾಗೂ ಇಂತಹ ಶಾಲೆಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ವಿವರಗಳನ್ನು ಸಂಗ್ರಹಿಸುವುದು.

2. ನೆರೆಯಿಂದ ಹಾನಿಗೊಳಗಾಗಿರುವ ಶಾಲೆಗಳ ವಿದ್ಯಾರ್ಥಿಗಳು ರಾಜ್ಯದ ಯಾವುದೇ ಜಿಲ್ಲೆಯ ಶಾಲೆಗಳಿಗೆ ದಾಖಲಾತಿ ಕೋರಿ ಬಂದಲ್ಲಿ ಸದರಿ ಮಕ್ಕಳನ್ನು ತಮ್ಮ ವ್ಯಾಪ್ತಿಯ ಶಾಲೆಯಲ್ಲಿ ದಾಖಲು ಮಾಡಿಕೊಳ್ಳಲು ಸರ್ಕಾರಿ ಶಾಲಾ ಮುಖ್ಯೋಪಾಧ್ಯಾಯರಿಗೆ ಸೂಚನೆ ನೀಡುವುದು. ರಾಜ್ಯದ ಯಾವುದೇ ಜಿಲ್ಲೆಗಳಲ್ಲಿ ನೆರೆ ಪೀಡಿತ ಪ್ರದೇಶಗಳಿಂದ ಬಂದು ದಾಖಲಾಗಿರುವ ವಿದ್ಯಾರ್ಥಿಗಳಿಗೆ ಸಮವಸ್ತ್ರವನ್ನು ಧರಿಸುವಂತೆ ಕಡ್ಡಾಯಗೊಳಿಸುವಂತಿಲ್ಲ.

3. ಇಂತಹ ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳುವಾಗ ಜನನ ಪ್ರಮಾಣ ಪತ್ರ/ವರ್ಗಾವಣೆ ಪ್ರಮಾಣ ಪತ್ರ ಅಥವಾ ಯಾವುದೇ ದಾಖಲೆಗಳನ್ನು ನೀಡುವಂತೆ ಒತ್ತಾಯಿಸದೆ ವಿದ್ಯಾರ್ಥಿ ಅಥವಾ ಪಾಲಕರಿಂದ ಸ್ವಯಂ ದೃಢೀಕೃತ ಪತ್ರವನ್ನು ಪಡೆದು ವಿದ್ಯಾರ್ಥಿಯು ಹಿಂದಿನ ಶಾಲೆಯಲ್ಲಿ ಯಾವ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುತ್ತಾರೆಯೋ ಅದೇ ತರಗತಿಗಳಿಗೆ ದಾಖಲಾತಿ ಮಾಡಿಕೊಳ್ಳುವುದು.
4. ಈ ಸಂಬಂಧ ದಾಖಲಾತಿ ಅಪೇಕ್ಷಿಸಿ ಬರುವ ಪೋಷಕರಿಗೆ ದಾಖಲಾತಿ ನಿರಾಕರಿಸದೆ ಕೂಡಲೇ ದಾಖಲಾತಿ ನೀಡುವಂತೆ ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ/ಅನುದಾನಿತ ಶಾಲೆಗಳ ಮುಖ್ಯೋಪಾಧ್ಯಾಯರಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡುವುದು.

**ಪಠ್ಯಪುಸ್ತಕಗಳು :**

1. ನೆರೆ ಹಾವಳಿಯಿಂದ ಪಠ್ಯಪುಸ್ತಕಗಳು ಹಾನಿಗೊಳಗಾಗಿರುವ ವಿದ್ಯಾರ್ಥಿಗಳಿಗೆ ಅಗತ್ಯವಿರುವ ಪಠ್ಯಪುಸ್ತಗಳನ್ನು ಪೂರೈಸಲು ಸರ್ಕಾರಿ/ಅನುದಾನಿತ ಹಾಗೂ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಶೀರ್ಷಿಕೆವಾರು ಬೇಡಿಕೆಯನ್ನು (Title wise Indent) ಕೂಡಲೇ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸೊಸೈಟಿ, ಬೆಂಗಳೂರು ಇವರಿಗೆ ಸಲ್ಲಿಸುವುದು.

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸೊಸೈಟಿ, ಬೆಂಗಳೂರು ಇವರು ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರಿಂದ ಸ್ವೀಕೃತವಾದ ಬೇಡಿಕೆಗಳಿಗನುಸಾರವಾಗಿ ಎಲ್ಲಾ ಶಾಲೆಗಳಿಗೆ ಪಠ್ಯಪುಸ್ತಕಗಳನ್ನು ಉಚಿತವಾಗಿ ಪೂರೈಸಲು ಕೂಡಲೇ ಕ್ರಮ ವಹಿಸುವುದು.

**ಶಾಲಾ ಕಟ್ಟಡ :**

ಪ್ರವಾಹ ಪರಿಸ್ಥಿತಿಯಿಂದಾಗಿ ಅನೇಕ ಶಾಲೆಗಳು ಮುಳುಗಡೆಗೊಂಡಿದ್ದು/ಶಾಲಾ ಕಟ್ಟಡಗಳಿಗೆ ಹಾನಿಯಾಗಿರುತ್ತದೆ. ಇಂತಹ ಶಾಲೆಗಳ ಮರು ನಿರ್ಮಾಣ/ಶಾಲಾ ಕಟ್ಟಡ ದುರಸ್ಥಿಗೆ ತುರ್ತಾಗಿ ಅಗತ್ಯ ಕ್ರಮಕೈಗೊಳ್ಳಬೇಕಾಗಿರುತ್ತದೆ.

ಆದ್ದರಿಂದ ಈ ಹಿನ್ನಲೆಯಲ್ಲಿ ಸಂಬಂಧಪಟ್ಟ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರು ದುರಸ್ಥಿಗೊಳಿಸಬೇಕಾದ ಶಾಲೆಗಳು ಮತ್ತು ಮರು ನಿರ್ಮಾಣ ಮಾಡಬೇಕಾಗಿರುವ ಶಾಲಾ ಕಟ್ಟಡಗಳ ವಿವರಗಳನ್ನೊಳಗೊಂಡ ಪ್ರಸ್ತಾವನೆಯನ್ನು ಅತೀ ತುರ್ತಾಗಿ ಜಿಲ್ಲಾಧಿಕಾರಿಗಳ ಕಛೇರಿಗೆ ಸಲ್ಲಿಸಿ ದುರಸ್ಥಿಗೆ ಕ್ರಮ ವಹಿಸಲು ಸೂಚಿಸಿದೆ.ಈ ಬಗ್ಗೆ ಈ ಕಛೇರಿಗೂ ವರದಿ ಸಲ್ಲಿಸುವುದು.

ಹಾನಿಗೊಳಗಾದ ಶಾಲೆಗಳು ಹಾಗೂ ಮಕ್ಕಳ ಶೈಕ್ಷಣಿಕ ಹಿತ ಕಾಪಾಡುವಲ್ಲಿ ಎಲ್ಲಾ ಅಗತ್ಯ ರೀತಿಯ ಕ್ರಮಗಳನ್ನು ವಹಿಸುವುದು.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು

ಗೆ,

ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ, ಇವರಿಗೆ ಅಗತ್ಯ ಕ್ರಮಕ್ಕಾಗಿ

**ಅನುಪಾಲನಾ ಕ್ರಮಕ್ಕಾಗಿ**

1. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ, ಬೆಂಗಳೂರು ಇವರಿಗೆ
2. ನಿರ್ದೇಶಕರು, ಪ್ರೌಢ ಶಿಕ್ಷಣ, ಬೆಂಗಳೂರು ಇವರಿಗೆ
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯ ಪುಸ್ತಕ ಸೊಸೈಟಿ, ಬೆಂಗಳೂರು
4. ಉಪನಿರ್ದೇಶಕರು (ಯೋಜನೆ), ಆಯುಕ್ತರ ಕಛೇರಿ, ಸಾ.ಶಿ.ಇ, ಬೆಂಗಳೂರು ಇವರು ಸಂಬಂಧಿಸಿದ ಜಿಲ್ಲೆಗಳಿಂದ ಪ್ರಸ್ತಾವನೆಗಳನ್ನು ಪಡೆದು ಕ್ರೋಢೀಕರಿಸಿ ಅನುದಾನ ಬಿಡುಗಡೆಗಾಗಿ ಸರ್ಕಾರಕ್ಕೆ ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವುದು.

**ಪ್ರತಿಯನ್ನು :**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಜಿಲ್ಲಾಧಿಕಾರಿಗಳು, ಕೊಡಗು, ದಕ್ಷಿಣ ಕನ್ನಡ, ಉಡುಪಿ, ಗದಗ, ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ಇವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಇವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕೋರಿದೆ.

ಕಛೇರಿ ಪ್ರತಿ.